# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಸುರೇಖಾ ಶ್ರೀಶೈಲ ಇಂಡಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಉಗಾರ ಬಿ.ಕೆ. ಗ್ರಾಮ ಪಂಚಾಯತಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM-1736/2016/PP, ದಿನಾಂಕ:, 18.05.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 10.05.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ವಜ್ರಕುಮಾರ್ ವಿಜಯಕುಮಾರ್ ಮಗದುಮ್ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, 2015-16 ನೇ ಸಾಲಿಗೆ ಸಂಬಂಧಿಸಿದಂತೆ ಮ.ಗಾಂ.ರಾ.ಗ್ರಾ.ಉ.ಖಾತರಿ ಯೋಜನೆ ಮತ್ತು ಸ್ವಚ್ಛ ಭಾರತ್ ಅಭಿಯಾನ ಯೋಜನೆ ಅಡಿಯಲ್ಲಿ ಮಂಜೂರಾದ ಹಣವನ್ನು ದುರುಪಯೋಗಪಡಿಸಿಕೊಳ್ಳಲಾಗಿದೆ ಹಾಗೂ ಮಳೆಯ ಪ್ರವಾಹ ನೀರನ್ನು ಹೊರ ಹಾಕುವುದು, ಸಿಸಿ ಗಟಾರ, ರಸ್ತೆ ನಿರ್ಮಾಣದಲ್ಲಿ ಅವ್ಯವಹಾರ ಎಸಗಿರುತ್ತಾರೆಂದು ದೂರಿರುತ್ತಾರೆ. ಈ ಬಗ್ಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆ ಕೈಗೊಳ್ಳಲಾಗಿದೆ.

ದೂರಿನಲ್ಲಿರುವ ಅಂಶಗಳನ್ನು, ಎದುರುದಾರರು ಸಲ್ಲಿಸಿರುವ ಆಕ್ಷೇಪಣೆಗಳನ್ನು ಹಾಗೂ ಸಹಾಯಕ ನಿರ್ದೇಶಕರು ಸಲ್ಲಿಸಿರುವ ತನಿಖಾ ವರದಿಯನ್ನು ಪರಿಶೀಲಿಸಿದಲ್ಲಿ, ಮ.ಗಾಂ.ರಾ.ಗ್ರಾ.ಉ.ಖಾತರಿ ಯೋಜನೆ ಮತ್ತು ಸ್ವಚ್ಛ ಭಾರತ್ ಅಭಿಯಾನ ಯೋಜನೆ ಅಡಿಯಲ್ಲಿ ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆ ನೀಡುವ ಅಧಿಕಾರವು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಇರುವುದಿಲ್ಲವೆಂದು ಸ್ಪಷ್ಟಪಡುತ್ತದೆ. ಆದರೆ, ಸಹಾಯಕ ನಿರ್ದೇಶಕರು ನೀಡಿರುವ ತನಿಖಾ ವರದಿಯ ಪ್ರಕಾರ ಅಥಣಿ ತಾಲ್ಲೂಕಿನ ಉಗಾರ ಬಿ.ಕೆ. ಗ್ರಾಮ ಪಂಚಾಯತಿಯಲ್ಲಿ 2016-17 ನೇ ಸಾಲಿನ ಮ.ಗಾಂ.ರಾ.ಗ್ರಾ.ಉ.ಖಾತರಿ ಯೋಜನೆಯಡಿಯಲ್ಲಿ ಕಾಮಗಾರಿಗಳ ಆಸ್ತಿ ವಹಿ ನಿರ್ವಹಿಸಿರುವುದಿಲ್ಲವೆಂಬುದು ಉದ್ಯೋಗದಾರರಿಗೆ ಕೂಲಿ ಪಾವತಿಸಿದ ಬಗ್ಗೆ ಉದ್ಯೋಗ ಚೀಟಿಯಲ್ಲಿ ನಮೂದು ಮಾಡಿರುವುದಿಲ್ಲವೆಂಬುದನ್ನು ಹಾಗೂ ಮ.ಗಾಂ.ರಾ.ಗ್ರಾ.ಉ.ಖಾತರಿ ಯೋಜನೆಯ ಕಡತಗಳ ನಮೂನೆ-8 ನ್ನು ಕಾಲೋಚಿತಗೊಳಿಸಿರುವುದಿಲ್ಲವೆಂಬುದನ್ನು ಸಹಾಯಕ ನಿರ್ದೇಶಕರು ಸದರಿ ನ್ಯೂನ್ಯತೆಗಳ ಬಗ್ಗೆ ವರದಿಯಲ್ಲಿ ತಿಳಿಸಿರುತ್ತಾರೆ. ಈ ಬಗ್ಗೆ ಉಗಾರ ಬಿ.ಕೆ. ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರಿಂದ ಆಕ್ಷೇಪಣೆ ಕರೆಯಲಾಗಿದ್ದು, ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರು ತಮ್ಮ ಆಕ್ಷೇಪಣೆ ಸಲ್ಲಿಸಿರುವುದಿಲ್ಲ. ಆದ್ದರಿಂದ ಉಗಾರ ಬಿ.ಕೆ. ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಮೇಲೆ ಹೇಳಿದ ನ್ಯೂನತೆಗಳಿಗೆ ಕಾರಣರಾಗಿ ಕರ್ತವ್ಯಲೋಪ ಎಸಗಿರುವುದು ಕಂಡು ಬರುತ್ತದೆ.

ಮೇಲೆ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರಿಕ ಸೇವೆ(ನಡತೆ) ನಿಯಮಗಳು 1966 ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿತ್ತಾರೆಂದು ಕಂಡುಬಂದಿದ್ದರಿಂದ, ಶ್ರೀಮತಿ ಸುರೇಖಾ ಶ್ರೀಶೈಲ ಇಂಡಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಉಗಾರ ಬಿ.ಕೆ. ಗ್ರಾಮ ಪಂಚಾಯತಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

*ಮುಂದಿನ ಪುಟಕ್ಕೆ...*

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀಮತಿ ಸುರೇಖಾ ಶ್ರೀಶೈಲ ಇಂಡಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಉಗಾರ ಬಿ.ಕೆ. ಗ್ರಾಮ ಪಂಚಾಯತಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 487 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 09.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಸುರೇಖಾ ಶ್ರೀಶೈಲ ಇಂಡಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಉಗಾರ ಬಿ.ಕೆ. ಗ್ರಾಮ ಪಂಚಾಯತಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 13 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5) ಕಾರ್ಯನಿರ್ವಾಹಕ ಅಧಿಕಾರಿ, ಅಥಣಿ ತಾಲ್ಲೂಕು ಪಂಚಾಯತಿ, ಅಥಣಿ, ಬೆಳಗಾವಿ ಜಿಲ್ಲೆ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6) ಶ್ರೀಮತಿ ಸುರೇಖಾ ಶ್ರೀಶೈಲ ಇಂಡಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಉಗಾರ ಬಿ.ಕೆ. ಗ್ರಾಮ ಪಂಚಾಯತಿ, ಅಥಣಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.